**ಕರ್ನಾಟಕ ಸರ್ಕಾರ**

**ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು ಇವರು ಹೊರಡಿಸಿರುವ ನಡವಳಿಗಳು**

ವಿಷಯ: ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ 2368/2011 ಪ್ರಕರಣದಲ್ಲಿ ದಿನಾಂಕ: 09-02-2017ರ ತೀರ್ಪಿನ ಹಿನ್ನೆಲೆಯಲ್ಲಿ ಸಂರಕ್ಷಣಾಧಿಕಾರಿಗಳ ವೃಂದದ ನೌಕರರ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಹೊರಡಿಸುವ ಬಗ್ಗೆ .

ಉಲ್ಲೇಖ:

1 ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾನಿಯಮ-1), ಸಿಆಸುಇ/ 182/ ಸೇನೆನಿ/2011,ದಿನಾಂಕ: 06.05.2017.

2. ಸಂರಕ್ಷಣಾಧಿಕಾರಿಗಳ ಹುದ್ದೆಗೆ *ಪರಿವೀಕ್ಷಣಾಧಿಕಾರಿ ದರ್ಜೆ-2ರ* ವೃಂದದಿಂದ ಮುಂಬಡ್ತಿ ಆದೇಶ ದಿನಾಂಕ:02.08.2011 ಮತ್ತು 31.05.2012.

3. ಸಂರಕ್ಷಣಾಧಿಕಾರಿ ಹುದ್ದೆಗಳ ನೇಮಕಾತಿ ಆದೇಶ ದಿನಾಂಕ: 29.09.2014, 20.10.2014 ಮತ್ತು 01.01.2016.

4 ಪರಿವೀಕ್ಷಣಾಧಿಕಾರಿ ದರ್ಜೆ-2ರ ವೃಂದದ ನೌಕರರ ದಿನಾಂಕ 01.01.2013 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ನಿಮಅಇ/ಜೇಷ್ಠತೆ/14/ಪದರ್ಜೆ-2/13-14 ದಿನಾಂಕ: 26.09.2014.

5. ಪರಿವೀಕ್ಷಣಾಧಿಕಾರಿ ದರ್ಜೆ-1ರ ವೃಂದದ ನೌಕರರ ದಿನಾಂಕ 01.01.2013 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ನಿಮಮಇ/ಜೇಷ್ಠತೆ/7/ಪದರ್ಜೆ-1/14-15 ದಿನಾಂಕ:09.12.2014.

6. ಸಂರಕ್ಷಣಾಧಿಕಾರಿ ವೃಂದದ ನೌಕರರ ದಿನಾಂಕ 01.01.2015 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ಮಮಅಇ/ಜೇಷ್ಠತೆ/ಸಂರ/28/15-16 ದಿನಾಂಕ: 24.07.2015.

7. ಸಂರಕ್ಷಣಾಧಿಕಾರಿ ವೃಂದದ ನೌಕರರ ದಿನಾಂಕ 01.01.2016 ರಂದಿನಂತಿನ ಅಂತಿಮ ಜೇಷ್ಠತಾ ಪಟ್ಟಿ ಆದೇಶ ಸಂಖ್ಯೆ: ಮಮಅಇ/ಜೇಷ್ಠತೆ/ಸಂರ/25/2016-17 ದಿನಾಂಕ:25.11.2016.

ಪ್ರಸ್ತಾವನೆ: ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ದಿನಾಂಕ:09.02.2017 ರಂದು ನೀಡಿರುವ ತೀರ್ಪಿನಲ್ಲಿ ರಾಜ್ಯ ಸರ್ಕಾರದ ನಾಗರೀಕ ಸೇವೆಗಳನ್ನು **"Karnataka Determination of Seniority of Govt servants promoted on the basis of Reservation Act 2002"** ರ ಸೆಕ್ಷನ್ 3 ಮತ್ತು 4ನ್ನು ಸಂವಿಧಾನದ ಅನುಚ್ಛೇಧ 14 ಮತ್ತು 16 ನ್ನು ಅಧಿಕಾರಾತೀತ (**ultra vires**) ಎಂದು ಆದೇಶಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ(1)ರ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶದಲ್ಲಿ ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ನೀಡಿರುವ ಮುಂಬಡ್ತಿಗಳಲ್ಲಿ ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡ ನೌಕರರಿಗೆ ಮೀಸಲಾತಿ ಅನುಸರಿಸಿರುವ ಅಧಿಕಾರಿಗಳ/ನೌಕರರ ಜೇಷ್ಠತಾ ಪಟ್ಟಿಗಳನ್ನು ಪುನರ್‌ಪರಿಶೀಲಿಸಲು ಆದೇಶಿಸಲಾಗಿದೆ. ಅದರಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ದಿನಾಂಕ: 27.04.1978 ರಿಂದ 01.01.2017 ರವರೆಗೆ ಹೊರಡಿಸಲಾಗಿರುವ ಅಧಿಕಾರಿ/ನೌಕರರ ಜೇಷ್ಠತೆ ಪುನರ್ ಪರಿಶೀಲಿಸಿ, ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸಬೇಕಿದೆ.